**ಮುಖ್ಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಹಾವೇರಿ.**

**ಸಿ.ಸಿ.ನಂ.34/2020**

| | | | |
|---|---|---|---|
| ಸಾಕ್ಷಿದಾರರ ಹೆಸರು | ಮುದುಕೇಶ ಮನ್ನೆಣ್ಣನವರ | ಸಿಡಬ್ಲ್ಯೂ | 17 |
| ತಂದೆಯ ಹೆಸರು | ಏಳುಕೋಟೆಪ್ಪ | ಪಿಡಬ್ಲ್ಯೂ | 7 |
| ವಯಸ್ಸು | 63 ವರ್ಷ | | |
| ಉದ್ಯೋಗ | ನಿವೃತ್ತ ಪಿ.ಎಸ್.ಐ | | |
| ವಾಸಸ್ಥಳ | ರಾಣೇಬೆನ್ನೂರ | | |

**ದಿಃ06.03.2026 ರಂದು ಸಾಕ್ಷಿದಾರರಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಹಿ.ಸ.ಸ.ಅಭಿಯೋಜಕರಿಂದ.**

1) ನಾನು 2010 ರಿಂದ 2019 ರವರೆಗೆ ಹಾವೇರಿ ಶಹರ ಪೊಲೀಸ ಠಾಣೆಯಲ್ಲಿ ಎ.ಎಸ್.ಐ ಆಗಿ ಸೇವೆ ಸಲ್ಲಿಸಿದ್ದೇನೆ. ದಿನಾಂಕಃ 16.09.2019 ರಂದು ಮಧ್ಯಾಹ್ನ 12-30 ಘಂಟೆಗೆ ನಾನು ಠಾಣಾ ಕರ್ತವ್ಯದಲ್ಲಿದ್ದಾ ಗ ಚಾ.ಸಾ-1 ಇವರು ಕೊಟ್ಟಂತಹ ಗಣಕೀಕೃತ ಪಿರ್ಯಾದಿಯ ಆಧಾರದ ಮೇಲೆ ಹಾವೇರಿ ಶಹರ ಪೊಲೀಸ ಠಾಣಾ ಗುನ್ನಾ ನಂಬರಃ 62/2019 ರಡಿಯಲ್ಲಿ ಪ್ರಕರಣವನ್ನು ದಾಖಲಿಸಿ ಪ್ರ.ವ.ವ ತಯಾರಿಸಿ ಮೇಲಾಧಿಕಾರಿಗಳಿಗೆ ಮತ್ತು ನ್ಯಾಯಾಲಯಕ್ಕೆ ಸಲ್ಲಿಸಿದ್ದೇನೆ.

2) ಅದೇ ದಿನ ಘಟನಾ ಸ್ಥಳಕ್ಕೆ ಬೇಟಿ ನೀಡಿ ಚಾ.ಸಾ-1 ಇವರು ತೋರಿಸಿದ ಘಟನಾ ಸ್ಥಳ ಪರಿಶೀಲಿಸಿ ಮಧ್ಯಾಹ್ನ 1-30 ರಿಂದ 2-15 ರವರೆಗೆ ಸ್ಥಳ ಪಂಚನಾಮೆ ಜರುಗಿಸಿ ಒಂದು ಪೋಟೋ ಸಹ ತೆಗೆದಿದ್ದೇನೆ. ಅದೇ ದಿವಸ ಚಾ.ಸಾ-4 ಇವರ ಹೇಳಿಕೆಯನ್ನು ಸಹ ಪಡೆದುಕೊಂಡಿದ್ದೇನೆ.

ಆರೋಪಿಗಳ ಪತ್ತೆಗಾಗಿ ಸಿಬ್ಬಂದಿಗಳನ್ನು ನೇಮಕ ಮಾಡಿದ್ದೇನೆ. ನಂತರ ಈ ಪ್ರಕರಣದ ಕಡತವನ್ನು ಮುಂದಿನ ತನಿಖೆಗಾಗಿ ಚಾ.ಸಾ-16 ಇವರಿಗೆ ವಹಿಸಿಕೊಟ್ಟಿದ್ದೇನೆ.

3) ನಾನು ಈ ಪ್ರಕರಣದಲ್ಲಿ ಸ್ವೀಕರಿಸಿದ ಪಿರ್ಯಾದಿಯನ್ನು ನೋಡಿದರೆ ಗುರುತಿಸಬಲ್ಲೆ, ಅದನ್ನು ಈಗಾಗಲೇ ನಿ.ಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿ.ಪಿ-2(ಬಿ) ಎಂದು ಗುರುತಿಸಲಾಯಿತು . ಪ್ರ.ವ.ವರದಿಯನ್ನು ನಿ.ಪಿ-5 ಎಂದು, ಸಾಕ್ಷಿಯ ಸಹಿಯನ್ನು ನಿ.ಪಿ-5(ಎ) ಎಂದು ಗುರುತಿಸಲಾಯಿತು. ಅದೇ ರೀತಿ ಘಟನಾ ಸ್ಥಳದ ಪಂಚನಾಮೆಯನ್ನು ನಿ.ಪಿ-6 ಎಂದು ಗುರುತಿಸಲಾಯಿತು. ಸಾಕ್ಷಿಯ ಸಹಿಯನ್ನು ನಿ.ಪಿ-6(ಎ) ಎಂದು ಗುರುತಿಸಲಾಯಿತು. ಪೋಟೋವನ್ನು ಈಗಾಗಲೇ ನಿ.ಪಿ-3 ಎಂದು ಗುರುತಿಸಲಾಗಿರುತ್ತದೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಪಾಟೀ ಸವಾಲು ಇರುವದಿಲ್ಲ ಎಂದು ನುಡಿಯುತ್ತಾರೆ.**

**ಮರು ವಿಚಾರಣೆ ಇಲ್ಲಾ.**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)

ನ. ಸ. ಓ. ಹೇ. ಕೇ. ಸರಿ ಇದೆ.
ಎಂದು ಒಪ್ಪಿರುತ್ತಾರೆ.

ಮುಖ್ಯ ನ್ಯಾಯಿಕ ದಂಡಾಧಿಕಾರಿಗಳು
ಹಾವೇರಿ.